## ಕರ್ನಾಟಕ ಸರ್ಕಾರ

ಸಂಖ್ಯೆ : ಇಡಿ 76 ಪಿಜಿಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ :19-06-2020

**-: ಸುತ್ತೋಲೆ :-**

ವಿಷಯ: 2020-21ನೇ ಸಾಲಿನಲ್ಲಿ ಖಾಸಗಿ ಅನುದಾನ ರಹಿತ ಶಾಲೆಗಳು ಶಾಲಾ ಶುಲ್ಕಗಳನ್ನು ಪರಿಷ್ಕರಿಸದಿರುವ ಬಗ್ಗೆ.

*****

ಕರ್ನಾಟಕ ಶಿಕ್ಷಣ ಕಾಯ್ದೆ, 1983ರಡಿಯಲ್ಲಿ ರಚಿಸಿರುವ ನಿಯಮಗಳು, 1999ರ ನಿಯಮ 4ರಲ್ಲಿ ಉಪ ನಿಯಮ (4)ರಲ್ಲಿ ಖಾಸಗಿ ಅನುದಾನ ರಹಿತ ಶಾಲೆಗಳಲ್ಲಿ ವಿದ್ಯಾರ್ಥಿಗಳ ಬೋಧನಾ ಶುಲ್ಕಗಳನ್ನು ಸರ್ಕಾರ ನಿಗಧಿಪಡಿಸಲು ಅವಕಾಶ ಕಲ್ಪಿಸಿದೆ.

ಪ್ರಸ್ತುತ ಕೊರೊನಾ ವೈರಸ್ (ಕೋವಿಡ್-19) ಸಾಂಕ್ರಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ದೇಶದಾದ್ಯಂತ ದಿ:24.03.2020ರಿಂದ ಲಾಕ್‌ಡೌನ್ ಘೋಷಣೆ ಮಾಡಿದ್ದು, ಇದರಿಂದಾಗಿ ಕೈಗಾರಿಕೆಗಳು ಹಾಗೂ ಆರ್ಥಿಕ ಚಟುವಟಿಕೆಗಳು ಸ್ಥಬ್ಧವಾಗಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರು ಸಾಕಷ್ಟು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುತ್ತಾರೆ. ಈ ಹಿನ್ನೆಲೆಯಲ್ಲಿ, ಖಾಸಗಿ ಅನುದಾನ ರಹಿತ ಶಾಲೆಗಳ ಪೋಷಕರು ಈ ಶೈಕ್ಷಣಿಕ ಸಾಲಿನಲ್ಲಿ ವಿದ್ಯಾರ್ಥಿಗಳ ಬೋಧನಾ ಶುಲ್ಕವನ್ನು ಹೆಚ್ಚಿಸದಂತೆ ಶಾಲಾ ಸಂಸ್ಥೆಗಳಿಗೆ ನಿರ್ದೇಶನ ನೀಡುವಂತೆ ಸಾಕಷ್ಟು ಮನವಿಗಳು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಆದ್ದರಿಂದ, ಕರ್ನಾಟಕ ಶಿಕ್ಷಣ ನಿಯಮ 1999ರಲ್ಲಿ ಕಲ್ಪಿಸಿರುವ ಅವಕಾಶವನ್ನು ಸರ್ಕಾರವು ಸಾರ್ವಜನಿಕರು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವುದನ್ನು ಪರಿಗಣಿಸಿ ಕರ್ನಾಟಕ ಶಿಕ್ಷಣ ಕಾಯ್ದೆ-1983, ಸೆಕ್ಷನ್-133, ಉಪನಿಯಮ-(2)ರ ಅಡಿಯಲ್ಲಿನ ಅಧಿಕಾರವನ್ನು ಚಲಾಯಿಸಿ ಎಲ್ಲಾ ಖಾಸಗಿ ಅನುದಾನ ರಹಿತ ಶಾಲೆಗಳು 2020-21ನೇ ಶೈಕ್ಷಣಿಕ ಸಾಲಿನಲ್ಲಿ ಯಾವುದೇ ಬೋಧನಾ ಶುಲ್ಕವನ್ನು ಹೆಚ್ಚಿಸಬಾರದೆಂದು ಸೂಚಿಸಿದೆ. ಒಂದುವೇಳೆ ಶಾಲಾ ಆಡಳಿತ ಮಂಡಳಿಯವರು 2019-20ನೇ ಶೈಕ್ಷಣಿಕ ಸಾಲಿಗಿಂತ ಹೆಚ್ಚಿನ ಬೋಧನಾ ಶುಲ್ಕವನ್ನು ಮಕ್ಕಳು/ಪೋಷಕರಿಂದ ಸಂಗ್ರಹಿಸಿದಲ್ಲಿ ಕರ್ನಾಟಕ ಶಿಕ್ಷಣ ಕಾಯ್ದೆ-124[ಎ]ರಡಿ ಕ್ರಮ ಜರುಗಿಸಲಾಗುವುದೆಂದು ಈ ಮೂಲಕ ಸೂಚಿಸಿದೆ.

ಶೇಖರ
(ಶೇಖರ) 19/06/2020
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಶಿಕ್ಷಣ ಇಲಾಖೆ (ಪ್ರಾಥಮಿಕ)

**ಇವರಿಗೆ:**

1. ಮಹಾಲೇಖಪಾಲರು, (ಅಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರ, ಜಿಲ್ಲಾಧಿಕಾರಿಗಳ ಕಛೇರಿ, ರಾಜ್ಯದ ಎಲ್ಲಾ ಜಿಲ್ಲೆಗಳ
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲುಬುರ್ಗಿ/ಧಾರವಾಡ.
5. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಸ್ಥೆ, ಬೆಂಗಳೂರು.

7. ನಿರ್ದೇಶಕರು, ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಬೆಂಗಳೂರು.
8. ನಿರ್ದೇಶಕರು (ಪ್ರಾಥಮಿಕ/ಪ್ರೌಢ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
9. ಸರ್ಕಾರದ ಉಪಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ರಾಜ್ಯ ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ.
11. ರಾಜ್ಯದ ಎಲ್ಲಾ ತಾಲ್ಲೂಕು/ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಸಾರ್ವಜನಿಕ ಶಿಕ್ಷಣ ಇಲಾಖೆ.
12. ಖಾಸಗಿ ಅನುದಾನ ರಹಿತ ಶಾಲಾ ಶಿಕ್ಷಣ ಸಂಸ್ಥೆಗಳು. [ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ]
13. ರಾಜ್ಯ ಪತ್ರ/ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು.